ಕೃಷಿ ವಿ.ವಿ: ಪ್ರಶಸ್ತಿಗೆ ಅರ್ಜಿ ಆಹ್ವಾನ

ಬೆಂಗಳೂರು: ಬೆಂಗಳೂರು ಕೃಷಿ ವಿಶ್ವವಿದ್ಯಾಲಯವು ರಾಜ್ಯ, ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ವಿವಿಧ ಪ್ರಶಸ್ತಿಗಳಿಗಾಗಿ ಅರ್ಜಿ ಆಹ್ವಾನಿಸಿದೆ. ಆಸಕ್ತ ರೈತರು, ರೈತ ಮಹಿಳೆಯರು ಅರ್ಜಿ ಸಲ್ಲಿಸಬಹುದಾಗಿದೆ. ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ ರಾಜ್ಯ ಮಟ್ಟದ ಅತ್ಯುತ್ತಮ ರೈತ ಅಥವಾ ರೈತ ಮಹಿಳೆ ಪ್ರಶಸ್ತಿ, ಡಾ. ಎಂ.ಎಚ್. ಮರೀಗೌಡ ರಾಜ್ಯ ಮಟ್ಟದ ಅತ್ಯುತ್ತಮ ತೋಟಗಾರಿಕಾ ರೈತ ಅಥವಾ ರೈತ ಮಹಿಳೆ ಪ್ರಶಸ್ತಿ, ಕೆನರಾ ಬ್ಯಾಂಕ್ ಪ್ರಯೋಜಿತ ಕ್ಯಾನ್ ಬ್ಯಾಂಕ್ ಅತ್ಯುತ್ತಮ ರೈತ ಮತ್ತು ರೈತ ಮಹಿಳೆ ಪ್ರಶಸ್ತಿ, ಡಾ.ಆರ್.ದ್ವಾರಕನಾಥ್ ಅತ್ಯುತ್ತಮ ವಿಸ್ತರಣಾ ಕಾರ್ಯಕರ್ತ ಪ್ರಶಸ್ತಿ, ಡಾ. ಆರ್. ದ್ವಾರಕನಾಥ್ ಅತ್ಯುತ್ತಮ ರೈತ ಅಥವಾ ರೈತ ಮಹಿಳೆ ಪ್ರಶಸ್ತಿ. ಜಿಲ್ಲಾ ಮಟ್ಟದ ಅತ್ಯುತ್ತಮ ರೈತ ಪ್ರಶಸ್ತಿ, ಜಿಲ್ಲಾ ಮಟ್ಟದ ಅತ್ಯುತ್ತಮ ರೈತ ಮಹಿಳೆ ಪ್ರಶಸ್ತಿ. ತಾಲೂಕು ಮಟ್ಟದ ಅತ್ಯುತ್ತಮ ಯುವ ರೈತ ಪ್ರಶಸ್ತಿ, ತಾಲೂಕು ಮಟ್ಟದ ಅತ್ಯುತ್ತಮ ಯುವ ರೈತ ಮಹಿಳೆ ಪ್ರಶಸ್ತಿಗಳಿವೆ. ನಿಗದಿತ ಅರ್ಜಿ ನಮೂನೆ ಜಂಟಿ ಕೃಷಿ ನಿರ್ದೇಶಕರ ಕಚೇರಿ, ವಿಸ್ತರಣಾ ನಿರ್ದೇಶಕರ ಕಚೇರಿ, ಜಿಕೆವಿಕೆ ಬೆಂಗಳೂರು ಮತ್ತು ಕೃಷಿ ವಿಜ್ಞಾನ ಕೇಂದ್ರಗಳಲ್ಲಿ ದೊರೆಯುತ್ತದೆ. ವೆಬ್‌ಸೈಟ್‌ನಲ್ಲೂ (www.uasbangalore.edu.in) ಸಹ ಅರ್ಜಿ ನಮೂನೆ ಲಭ್ಯ. ಜುಲೈ 31ರ ಒಳಗೆ ಅರ್ಜಿಗಳನ್ನು ಸಲ್ಲಿಸಬೇಕು ಎಂದು ಪ್ರಕಟಣೆ ತಿಳಿಸಿದೆ. ಮಾಹಿತಿಗೆ 080-23330153ಕ್ಕೆ ಸಂಪರ್ಕಿಸಬಹುದು.

08-07-2022 Vsv Pg 03

ರೈತ ಪ್ರಶಸ್ತಿಗೆ ಅರ್ಜಿ ಆಹ್ವಾನ

■ ವಿಕ ಸುದ್ದಿಲೋಕ ಬೆಂಗಳೂರು

ಬೆಂಗಳೂರು ಕೃಷಿ ವಿವಿಯು ಅಕ್ಟೋಬರ್ ತಿಂಗಳಲ್ಲಿ ಆಯೋಜಿಸಲಿರುವ ಪ್ರಸಕ್ತ ಸಾಲಿನ ಕೃಷಿ ಮೇಳದ ಅಂಗವಾಗಿ ರಾಜ್ಯ, ಜಿಲ್ಲಾ ಹಾಗೂ ತಾಲೂಕು ಮಟ್ಟದ (ತನ್ನ ಆಡಳಿತದ ವ್ಯಾಪ್ತಿಯಲ್ಲಿ ಬರುವ 10 ಜಿಲ್ಲೆಗಳ) ನಾನಾ ಪ್ರಶಸ್ತಿಗಳಿ ಗಾಗಿ ರೈತ ಹಾಗೂ ರೈತ ಮಹಿಳೆಯರಿಂದ ಅರ್ಜಿಗಳನ್ನು ಆಹ್ವಾನಿಸಿದೆ.

ನಿಗದಿತ ಅರ್ಜಿ ನಮೂನೆಯು ಆಯಾ ಜಿಲ್ಲೆಗಳ ಜಂಟಿ ಕೃಷಿ ನಿರ್ದೇಶಕರ ಕಚೇರಿ, ವಿಸ್ತರಣಾ ನಿರ್ದೇಶಕರ ಕಚೇರಿ, ಜಿಕೆವಿಕೆ, ಬೆಂಗಳೂರು, ಕೃಷಿ ವಿಜ್ಞಾನ ಕೇಂದ್ರಗಳಲ್ಲಿ ದೊರೆಯುತ್ತವೆ. ಕೃಷಿ ವಿವಿಯ ವೆಬ್‌ಸೈಟ್‌ನಲ್ಲೂ (www.uasbangalore.edu.in) ಲಭ್ಯ. ಅರ್ಜಿ ಗಳನ್ನು ಜು.31ರೊಳಗೆ ಸಲ್ಲಿಸಬೇಕು. **ಸಂಪರ್ಕಿಸುವ ವಿಳಾಸ** ಕೃಷಿ ವಿಸ್ತರಣಾ ನಿರ್ದೇಶಕರ ಕಚೇರಿ, ಕೃಷಿ ವಿವಿ, ಜಿಕೆವಿಕೆ, ಬೆಂ-65. ದೂರವಾಣಿ: 080-23330153, ವಿಸ್ತರಣೆ: 401.


08-07-2022 Vk Pg 03

ಬಿಜೆಪಿ ಯುವ ಮೋರ್ಚಾ ಕಾರ್ಯಕ್ರಮದಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ನಳಿನ್‌ಕುಮಾರ್ ಕಟೀಲ್

1,093 ರೈತ ಉತ್ಪಾದಕ ಸಂಸ್ಥೆಗಳ ರಚನೆ

ಬೆಂಗಳೂರು: ಕೇಂದ್ರ ಸರಕಾರದ ಯೋಜನೆಯಡಿ ರಾಜ್ಯ ಸರಕಾರದ ನೆರವಿನೊಂದಿಗೆ ರಾಜ್ಯದಲ್ಲಿ 1,093 ರೈತ ಉತ್ಪಾದಕ ಸಂಸ್ಥೆಗಳನ್ನು (ಎಫ್‌ಪಿಒ) ರಚಿಸಲಾಗಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ನಳಿನ್ ಕುಮಾರ್ ಕಟೀಲ್ ಹೇಳಿದ್ದಾರೆ.

ಬಿಜೆಪಿ ರಾಜ್ಯ ರೈತ ಮೋರ್ಚಾದ ವತಿಯಿಂದ ಬಿಜೆಪಿ ರಾಜ್ಯ ಕಾರ್ಯಾಲಯದಲ್ಲಿ 'ರೈತ ಉತ್ಪಾದಕ ಸಂಸ್ಥೆಗಳಿಗೆ ಇರುವ ಮಾರುಕಟ್ಟೆ ಅವಕಾಶಗಳು' ಕುರಿತ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿ, ಪ್ರತಿ ಎಫ್‌ಪಿಒಗೆ ಕೇಂದ್ರ ಮತ್ತು ರಾಜ್ಯ ಸರಕಾರಗಳಿಂದ ಒಟ್ಟು ಸುಮಾರು 80 ಲಕ್ಷ ರು. ನೀಡಲಾಗುತ್ತಿದೆ. ಅದರ ಮೂಲಕ ರೈತರ ವಾರ್ಷಿಕ ಆದಾಯ ದುಪ್ಪಟ್ಟುಗೊಳಿಸಲು ಪ್ರಧಾನಿ ನರೇಂದ್ರ ಮೋದಿ ದೃಢಸಂಕಲ್ಪ ಮಾಡಿದ್ದು, ಕಾರ್ಯ ಪ್ರವೃತ್ತರಾಗಿದ್ದಾರೆ ಎಂದರು.



ಬಿಜೆಪಿ ರಾಜ್ಯ ರೈತ ಮೋರ್ಚಾದ ವತಿಯಿಂದ ಬಿಜೆಪಿ ರಾಜ್ಯ ಕಾರ್ಯಾಲಯದಲ್ಲಿ 'ರೈತ ಉತ್ಪಾದಕ ಸಂಸ್ಥೆಗಳಿಗೆ ಇರುವ ಮಾರುಕಟ್ಟೆ ಅವಕಾಶಗಳು' ಕುರಿತ ಕಾರ್ಯಾಗಾರವನ್ನು ಬಿಜೆಪಿ ರಾಜ್ಯಾಧ್ಯಕ್ಷ ನಳೆನ್ ಕುಮಾರ್ ಕಟೀಲ್ ಉದ್ಘಾಟಿಸಿದರು. ಮೋರ್ಚಾ ಅಧ್ಯಕ್ಷ ಈರಣ್ಣ ಕಡಾಡಿ, ಡಾ.ಶ್ರೀಕಂಠಮೂರ್ತಿ, ವೆಂಕಟ್‌ರೆಡ್ಡಿಮತ್ತಿತರರು ಇದ್ದರು.

> ನಮ್ಮ ಸರಕಾರ ಯೋಜನೆಗಳ ಬಗ್ಗೆ ಕೇವಲ ಮಾತನಾಡುವುದಿಲ್ಲ. ಯೋಜನೆಗಳನ್ನು ಕೆಳಹಂತದ ವರೆಗೆ ತಲುಪಿಸುವ ಕಾರ್ಯ ಮಾಡುತ್ತಿದೆ. ಸರಕಾರ ಮತ್ತು ರೈತರ ಮಧ್ಯೆ ಕೊಂಡಿಯಾಗಿ ರೈತ ಮೋರ್ಚಾ ಕೆಲಸ ಮಾಡುತ್ತಿದೆ. ಈ ಕೆಲಸ ಇನ್ನೂ ಹೆಚ್ಚು ಪರಿಣಾಮಕಾರಿಯಾಗಿ ನಡೆಯಬೇಕು.
>
> -ಈರಣ್ಣ ಕಡಾಡಿ
> ಬಿಜೆಪಿ ರೈತ ಮೋರ್ಚಾ ರಾಜ್ಯಾಧ್ಯಕ್ಷ

ಬಿಜೆಪಿ ಸರಕಾರ ರೈತರ ಸಮಸ್ಯೆಗಳಿಗೆ ಪರಿಹಾರ ನೀಡಿದೆ. ಕಿಸಾನ್ ಸಮ್ಮಾನ್ ಯೋಜನೆಯಡಿ ಕೇಂದ್ರ ಸರಕಾರ ಆರು ಸಾವಿರ ರು. ಮತ್ತು ರಾಜ್ಯದ ಯಡಿಯೂರಪ್ಪ ಬಸವರಾಜ ಬೊಮ್ಮಾಯಿ ಅವರ ನೇತೃತ್ವದ ಸರಕಾರಗಳು 4 ಸಾವಿರ ರು. ಖಾತೆಗೆ ಜಮಾ ಮಾಡುತ್ತಿವೆ. ಇದರಿಂದ ಕೃಷಿ ಆದಾಯ ಹೆಚ್ಚಿದ್ದು, ಎಂಜಿನಿಯರ್‌ಗಳು ಸೇರಿದಂತೆ ನಗರ ಗಳಲ್ಲಿ ಉದ್ಯೋಗದಲ್ಲಿರುವವರು ಕೃಷಿಯತ್ತ ಮುಖ ಮಾಡುತ್ತಿದ್ದಾರೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಗಳಾದ ಜಿಕೆವಿಕೆ ನಿವೃತ್ತ ಪ್ರಾಧ್ಯಾಪಕ ಡಾ.ಶ್ರೀಕಂಠಮೂರ್ತಿ, ವೆಂಕಟ್ ರೆಡ್ಡಿ, ರೈತ ಮೋರ್ಚಾ ಪ್ರಧಾನ ಕಾರ್ಯದರ್ಶಿ ಶಿವಪ್ರಸಾದ್, ಗುರುಲಿಂಗ ಗೌಡರ, ರೈತ ಮೋರ್ಚಾ ಕಾರ್ಯದರ್ಶಿ ಡಾ.ನವೀನ್ ಇದ್ದರು.

ಎರಡು ಜಿಲ್ಲೆಯಲ್ಲಿ 2 ಸಾವಿರ ಹೆಕ್ಟೇರ್ ಬಿತ್ತನೆ ಪ್ರದೇಶ ಗುರಿ ಕಡಿಮೆ

ಇಳಿಯುತ್ತಿರುವ ಈರುಳ್ಳಿ ಬೆಳೆ ಕ್ಷೇತ್ರ

■ ಸಂತೋಷ್ ಮಹಾಂತ ಶೆಟ್ಟರ
ರಾಣೇಬೆನ್ನೂರ
santoshettyp@gmail.com

ಧಾರವಾಡ, ಗದಗ, ಹಾವೇರಿ ಜಿಲ್ಲೆಗಳ ನಾನಾ ಪ್ರದೇಶಗಳಲ್ಲಿ ಈರುಳ್ಳಿ ಪ್ರಮುಖ ಬೆಳೆಯಾಗಿದೆ. ಆದರೆ, ಬೆಳೆ ಕ್ಷೇತ್ರ ವರ್ಷದಿಂದ ವರ್ಷಕ್ಕೆ ಕುಂಠಿತವಾಗುತ್ತಿದೆ. ಈ ವರ್ಷವೂ ರೈತರು ಈರುಳ್ಳಿ ಬಿತ್ತನೆ ಬಗ್ಗೆ ಆಸಕ್ತಿ ಕಳೆದುಕೊಂಡಿದ್ದಾರೆ.

ಗದಗ ಜಿಲ್ಲೆಯಲ್ಲಿ ಈರುಳ್ಳಿ ಬಿತ್ತನೆ ಕಡಿಮೆ ಆಗಿದೆ. ಕಳೆದ ವರ್ಷ 27000 ಹೆಕ್ಟೇರ್ ಈರುಳ್ಳಿ ಬಿತ್ತನೆ ಮಾಡಲಾಗಿದೆ. ಪ್ರಸಕ್ತ ವರ್ಷ 25000 ಹೆಕ್ಟೇರ್ ಬಿತ್ತನೆ ಗುರಿ ಇದೆ. ಇದುವರೆಗೆ 15000 ಸಾವಿರ ಹೆಕ್ಟೇರ್ ಮಾತ್ರ ಬಿತ್ತನೆ ಮಾಡಲಾಗಿದೆ. ಕೆಲವು ರೈತರು ಈರುಳ್ಳಿ ಬದಲಾಗಿ ಮೆಣಸಿನಕಾಯಿ ಹಾಗೂ ಹೆಸರು ಬಿತ್ತನೆ ಮಾಡಲು ಮುಂದಾಗಿದ್ದಾರೆ.



ವೆಚ್ಚ ಅಧಿಕ, ಮಳೆ ಕೊರತೆ, ಸಿಗದ ಬೆಂಬಲ ಬೆಲೆ

ಕಟಾವು ಸಮಯದಲ್ಲಿ ಅಕಾಲಿಕ ಮಳೆಯಿಂದ ನಷ್ಟ

■ ಧಾರವಾಡ ಜಿಲ್ಲೆಯಲ್ಲಿ ಕಳೆದ ವರ್ಷ 21,000 ಹೆಕ್ಟೇರ್ ಬಿತ್ತನೆ ಗುರಿ ಇತ್ತು. ಈ ಪೈಕಿ 9,210 ಹೆಕ್ಟೇರ್ ಬಿತ್ತನೆ ಆಗಿತ್ತು. ಇದರಿಂದ 2,02,623 ಮೆಟ್ರಿಕ್ ಟನ್ ಈರುಳ್ಳಿ ಉತ್ಪಾದನೆ ಆಗಿತ್ತು. ಪ್ರಸಕ್ತ ವರ್ಷದಲ್ಲಿ 15,650 ಹೆಕ್ಟೇರ್ ಬಿತ್ತನೆ ಪ್ರದೇಶದ ಗುರಿ ಇದೆ. ಪ್ರತಿ ಹೆಕ್ಟೇರ್ ಗೆ 20-22 ಟನ್ ಉತ್ಪಾದನೆ ಗುರಿ ಇದೆ.

■ ಕಳೆದ ವರ್ಷ ನಿರಂತರ ಮಳೆ ಸರಿದ ಪರಿಣಾಮ ಸಾಕಷ್ಟು ಪ್ರಮಾಣದಲ್ಲಿ ಬೆಳೆ ಹಾನಿ ಆಗಿದೆ. ಹೀಗಾಗಿ ಉತ್ಪಾದನೆ ಹಾಗೂ ಬಿತ್ತನೆ ಪ್ರದೇಶವೂ ಕಡಿಮೆ ಆಗಿದೆ ಎಂದು ತೋಟಗಾರಿಕೆ ಇಲಾಖೆ ಅಧಿಕಾರಿಗಳು ತಿಳಿಸಿದ್ದಾರೆ.

■ ಹಾವೇರಿ ಜಿಲ್ಲೆಯಲ್ಲಿ ಕಳೆದ ವರ್ಷ 4042 ಹೆಕ್ಟೇರ್ ಈರುಳ್ಳಿ ಬಿತ್ತನೆಯಾಗಿತ್ತು. ಈ ವರ್ಷ ಮಳೆ ಕೊರತೆ ಕಾರಣಕ್ಕೆ ಸುಮಾರು 2200 ರಿಂದ 2500 ಹೆಕ್ಟೇರ್ ಬಿತ್ತನೆಯಾಗಿದ್ದು ಇನ್ನೂ ಜುಲೈ 2ನೇ ವಾರದ ವರೆಗೂ ಬಿತ್ತನೆಗೆ ಅವಕಾಶ ಇರುವ ಹಿನ್ನೆಲೆಯಲ್ಲಿ ಕುಂಠಿತ ಎನ್ನಲಾಗದು ಎಂಬುದು ತೋಟಗಾರಿಕೆ ಇಲಾಖೆ ಉಪ ನಿರ್ದೇಶಕ ಪ್ರದೀಪ ಕುಮಾರ ಅಭಿಮತ.

■ ಉಳ್ಳಾಗಡ್ಡಿಗೆ ಪರ್ಯಾಯವಾಗಿ ಮೆಕ್ಕೆಜೋಳ, ಸೋಯಾ ಬಿನ್ ಬೆಳೆ ಆಯ್ದುಕೊಂಡಿದ್ದು, ಈ ವರ್ಷ ಮೆಕ್ಕೆಜೋಳ ಬೆಳೆಯ ಕ್ಷೇತ್ರ ಹೆಚ್ಚಾಗಿದೆ.


■ ಉತ್ತರ ಕನ್ನಡ ಜಿಲ್ಲೆಯಲ್ಲಿ ಕುಮಟಾದಲ್ಲಿ ಮಾತ್ರ ವಿಶೇಷವಾದ ಸಿಹಿ ಈರುಳ್ಳಿ ಬೆಳೆಯಲಾಗುತ್ತಿದೆ. ಸುಮಾರು 100 ಎಕರೆಯಲ್ಲಿ ಬೆಳೆಯುತ್ತಾರೆ. 2 ವರ್ಷಗಳಿಂದ ತಿರುಚು ರೋಗ ಬರುತ್ತಿದೆ. ಆದರೂ ಬೆಳೆ ಪ್ರದೇಶ ಏರಿಳಿಕೆ ಆಗಿಲ್ಲ, ಇಳುವರಿ ಮಾತ्र ಸ್ವಲ್ಪ ಕಡಿಮೆಯಾಗಿದೆ.

08-07-2022
Vk Pg 10

ಕೃಷಿ ಉದ್ಯಮವಾಗಬೇಕಾದ್ದು ಇಂದಿನ ಅಗತ್ಯ: ಮಹಾಬಲೇಶ್ವರ

ಕರ್ನಾಟಕ ಬ್ಯಾಂಕ್ ಕೃಷಿ ಅಧಿಕಾರಿಗಳ ಸಮ್ಮೇಳನ

ಮಂಗಳೂರು: ನಿರಂತರ ಬದಲಾಗುತ್ತಿರುವ ವಾತಾವರಣಕ್ಕೆ ಅನುಗುಣವಾಗಿ ಕೃಷಿಕರು ನವೀನ ತಂತ್ರಜ್ಞಾನ ಹಾಗೂ ನೂತನ ಆವಿಷ್ಕಾರಗಳನ್ನು ಕೃಷಿಯಲ್ಲಿ ಅಳವಡಿಸಿಕೊಳ್ಳಬೇಕು. ಡ್ರೋನ್ ತಂತ್ರಜ್ಞಾನದ ಸದ್ಬಳಕೆಯಿಂದ ಕರಾರುವಕ್ಕಾದ ಕೃಷಿಯ ಅನುಷ್ಠಾನ ಪ್ರಸ್ತುತ ಕಾಲಘಟ್ಟದ ಅಗತ್ಯವಾಗಿದೆ ಎಂದು ಕರ್ನಾಟಕ ಬ್ಯಾಂಕ್ ವ್ಯವಸ್ಥಾಪಕ ನಿರ್ದೇಶಕ ಮಹಾಬಲೇಶ್ವರ ಎಂ.ಎಸ್.ಹೇಳಿದರು.



ಕರ್ನಾಟಕ ಬ್ಯಾಂಕಿನ ಮಂಗಳೂರು ಪ್ರಧಾನ ಕಚೇರಿಯಲ್ಲಿ ಗುರುವಾರ ಸಂಪನ್ನಗೊಂಡ ಬ್ಯಾಂಕಿನ ಕೃಷಿ ಅಧಿಕಾರಿಗಳ ಸಮ್ಮೇಳನದಲ್ಲಿ ಮಾತನಾಡಿದ ಅವರು, ಕೃಷಿ ಉದ್ಯಮವಾದರೆ ಆಹಾರ ಧಾನ್ಯಗಳ ಉತ್ಪಾದನೆಯಲ್ಲಿ ಹೆಚ್ಚಳ ಹಾಗೂ ಅವುಗಳ ನಿರಂತರ ಪೂರೈಕೆಯೊಂದಿಗೆ ಕೈಗೆಟಕುವ ದರದಲ್ಲಿ ಲಭ್ಯವಾಗಲು ಸಾಧ್ಯವಾಗುತ್ತದೆ. ಆಹಾರ ಉತ್ಪನ್ನಗಳ ಸಂಸ್ಕರಣೆಯೂ ಕೃಷಿಯಲ್ಲಿ ಅತೀ ಅವಶ್ಯಕವಾಗಿದೆ. ನೈಸರ್ಗಿಕ ವಿಕೋಪಗಳನ್ನು ಎದುರಿಸಲು, ಕೀಟಗಳ ಮತ್ತು ರೋಗಗಳ ಬಾಧೆಯನ್ನು ಕಡಿಮೆ ಮಾಡಲು ಮತ್ತು ಪ್ರತಿಕೂಲ ಹವಾಮಾನ ಪರಿಸ್ಥಿತಿಗಳನ್ನು ಎದುರಿಸಿ ಬೆಳೆಗಳ ಉತ್ಪಾದಕತೆಯನ್ನು ಸುಧಾರಿಸಲು ಆಧುನಿಕ ಕೃಷಿ ಪದ್ಧತಿಗಳನ್ನು ರೈತರು ಅಳವಡಿಸಿಕೊಳ್ಳುವತ್ತ ಇನ್ನೂ ಹೆಚ್ಚಿನ ಗಮನ ಹರಿಸಬೇಕಿದೆ. ಈ ನಿಟ್ಟಿನಲ್ಲಿ ಬ್ಯಾಂಕ್‌ಗಳು ಸಹ ರೈತರಿಗೆ ಬೆಂಬಲವಾಗಿ ನಿಲ್ಲಬೇಕು. ಅಗತ್ಯವಾದ ಸಾಲದ ಅವಕಾಶಗಳನ್ನು ಒದಗಿಸಿ, ಕೃಷಿ ಬಂಡವಾಳವನ್ನು ಹೆಚ್ಚು ಪರಿಣಾಮಕಾರಿಯಾಗಿ ನಿರ್ವಹಿಸಲು ತಾಂತ್ರಿಕ ನೆರವುಗಳನ್ನು ನೀಡಬೇಕು ಎಂದು ತಿಳಿಸಿದರು.

08-07-2022
Kp Pg 06

For more information visit
University Library Website
Web - uasbagrilibindia.org
E-mail- librarian@uasbangalore.edu.in